ಶ್ರೀ ಆರ್. ರೋಷನ್ ಬೇಗ್ (ಪ್ರವಾಸೋದ್ಯಮ ಹಾಗೂ ಹಜ್ ಸಚಿವರು) :

1. ಶಿವಮೊಗ್ಗದಲ್ಲಿ ಪ್ರವಾಸಿ ಮಾಹಿತಿ ಕೇಂದ್ರ ಇದೆ.

## ರಾಜ್ಯದಲ್ಲಿನ ಅರಣ್ಯ ಪ್ರದೇಶದಲ್ಲಿ ಒತ್ತುವರಿ ಮಾಡಿರುವುದು

4946 - ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ರಾಜ್ಯದಲ್ಲಿ ರೈತರು ಅರಣ್ಯ ಪ್ರದೇಶದಲ್ಲಿ ಎಷ್ಟು ಎಕರೆ ಜಮೀನನ್ನು ಒತ್ತುವರಿ ಮಾಡಲಾಗಿದೆ? ಅದನ್ನು ಸಿಂಧು ಮಾಡಲು ಸಾಧ್ಯವಿಲ್ಲವೇ?*

*ಆ) ಮಲೆನಾಡು ಪ್ರದೇಶದಲ್ಲಿ ರೈತರು ಕಾಫಿ ತೋಟಕ್ಕೆ ಅರಣ್ಯ ಪ್ರದೇಶದಲ್ಲಿ ಎಷ್ಟು ಎಕರೆ ಒತ್ತುವರಿ ಮಾಡಲಾಗಿದೆ?*

*ಇ) ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?*

ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) 2,69,346 ಎಕರೆ (1,09,047 ಹೆಕ್ಟೇರ್)

ಕೇಂದ್ರ ಸರ್ಕಾರವು 19348 ಕುಟುಂಬಗಳು 27.4.1978ಕ್ಕೆ ಮುಂಚೆ ಮಾಡಿರುವ 14,848.83 ಹೆಕ್ಟೇರು ಅರ್ಹ ಅತಿಕ್ರಮಣಗಳನ್ನು ಸಕ್ರಮ ಮಾಡಲು ಅನುಮೋದನೆ ನೀಡಿದೆ. ಇದರಂತೆ ರಾಜ್ಯ ಸರ್ಕಾರವು ಹೊರಡಿಸಿರುವ ಆದೇಶ ಸಂಖ್ಯೆ : ಅಪಜೀ 5 ಎಫ್‌ಜಿಎಲ್ 90, ದಿನಾಂಕ 5.5.97ರಲ್ಲಿ ನಮೂದಿಸಿರುವ ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಸಕ್ರಮಗೊಳಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಉಳಿದ ಎಲ್ಲಾ ಅತಿಕ್ರಮಣಗಳನ್ನು ಖಿಲ್ಲಾಪಡಿಸಲು ಕೇಂದ್ರ ಸರ್ಕಾರವು ಆದೇಶಿಸಿದೆ.

ಆ) 22032 ಎಕರೆ (8920 ಹೆಕ್ಟೇರ್).

ಇ) ಅನರ್ಹ ಅತಿಕ್ರಮಣಗಳನ್ನು ತೆರವುಗೊಳಿಸಲು ಕರ್ನಾಟಕ ಅರಣ್ಯ ಕಾಯ್ದೆ 1963ರ ಸೆಕ್ಷನ್ 64(ಎ) ಪ್ರಕಾರ ಕ್ರಮವನ್ನು ತೆಗೆದುಕೊಳ್ಳಲಾಗುತ್ತಿದೆ.

## ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಪಶುವೈದ್ಯಕೀಯ ಸೇವಾ ಸೌಲಭ್ಯ

4947 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*1. ಚಾಮುಂಡೇಶ್ವರಿ ಕ್ಷೇತ್ರದ ಗ್ರಾಮೀಣ ಪ್ರದೇಶದಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳಿವೆ?*

*2. ಈ ಪಶು ಚಿಕಿತ್ಸಾಲಯಗಳನ್ನು ಪಶು ವೈದ್ಯಕೀಯ ಆಸ್ಪತ್ರೆಗೆ ಏರಿಸುವ ತೀರ್ಮಾನವನ್ನು ಸರ್ಕಾರ ಕೈಗೊಂಡಿದೆಯೆ?*